ಸಿವಿಲ್ ನ್ಯಾಯಾಧೀಶರು ಮತ್ತು ಹೆ. ಪ್ರದನ್ಯಾದಂ.ರವರ ನ್ಯಾಯಾಲಯ, ತರೀಕೆರೆ

ಸಿ.ಸಿ.ನಂ.416/2018

ದಿನಾಂಕಃ15.05.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಿ.ಡಬ್ಲ್ಯೂಃ 5 ಸಿ.ಡಬ್ಲ್ಯೂಃ 14

ಸಾಕ್ಷಿಯ ಹೆಸರು : ಜಗದೀಶ್
ತಂದೆಯ ಹೆಸರು : ರಾಮಲಿಂಗಪ್ಪ
ವಯಸ್ಸು : 54 ವರ್ಷ
ಉದ್ಯೋಗ : ವ್ಯವಸಾಯ
ವಾಸ : ಮುಗುಳಿ.

**ಮುಖ್ಯ ವಿಚಾರಣೆಃ** ಮಾನ್ಯ ಸ ಸ ಅ ಅವರಿಂದಃ-

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಿದ್ದು, ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು, ಸದರಿ ಮಹಜರ್ ಗೆ ಸಮಾರು ಒಂದುವರೆ ವರ್ಷದ ಹಿಂದೆ ಅಜ್ಜಂಪುರ ಪೊಲೀಸ್ ಠಾಣೆಯ ಆವರಣದಲ್ಲಿ ಸಹಿ ಮಾಡಿರುತ್ತೇನೆ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿರುವುದಿಲ್ಲ ಮತ್ತು ಯಾವುದೇ ವಾಹನವನ್ನು ವಶಪಡಿಸಿಕೊಂಡಿರುವುದಿಲ್ಲ. ಯಾವುದೇ ಛಾಯಾಚಿತ್ರವನ್ನು ತೆಗೆದಿರುವುದಿಲ್ಲ.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಿದ್ದು, ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು, ಅದನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ.6 ಎ ಎಂದು ಗುರುತಿಸಲಾಯಿತು.

*(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)*

**ಪಾಟೀ ಸವಾಲುಃ** ಮಾನ್ಯ ಸ ಸ ಅ ರವರಿಂದ ಃ-

ದಿಃ26.01.2017 ರಂದು ಬೆಳಗ್ಗೆ 11.30 ರಿಂದ 12.00 ಗಂಟೆಯವರೆಗೆ ಅಜ್ಜಂಪುರ ಪೊಲೀಸ್ ಠಾಣೆಯ ಆವರಣದಲ್ಲಿ ಈ ಪ್ರಕರಣದಲ್ಲಿ ನನ್ನ ಸಮಕ್ಷಮ ಗೂಡ್ಸ್ ಆಟೋ ನೋಂದಣಿ ಸಂಖ್ಯೆ

ಕೆ ಎ 18 ಎ 8611 ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

ನಿಪಿ6 ರಲ್ಲಿ ಬರೆದಿರುವ ವಿಚಾರಗಳು ಪೊಲೀಸರು ಓದಿ ಹೇಳಿದ ಮೇಲೆ ನಾನು ಸಹಿ ಹಾಕಿರುತ್ತೇನೆ ಎಂದರೆ ಸರಿಯಲ್ಲ. ನಿಪಿ6 ರಲ್ಲಿ ಇರುವ ವಿಚಾರಗಳು ನನಗೆ ಗೊತ್ತಿದ್ದರೂ ಸಹ ನಾನು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದಃ-

ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ ಃ ಇಲ್ಲ**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಶಿವಕುಮಾರ್ ಆರ್.)
ಸಿವಿಲ್ ನ್ಯಾಯಾಧೀಶರು ಮತ್ತು
ಹೆ.ಪ್ರ.ದ.ನ್ಯಾ.ದಂಡಾಧಿಕಾರಿ, ತರೀಕೆರೆ.